ಸದನವು ಮಧ್ಯಾಹ್ನ ಪುನಃ 4 ಗಂಟೆ 12 ನಿಮಿಷಕ್ಕೆ ಸಮಾವೇಶಗೊಂಡಿತು. ಅಧ್ಯಕ್ಷರು ಪೀಠವನ್ನಲಂಕರಿಸಿದರು.

4) <u>ಪ್ರಕಟಣೆ</u>

ವಿಷಯ :– ಆಧುನಿಕ ಕನ್ನಡ ಸಾಹಿತ್ಯ ಕ್ಷೇತ್ರದ ಚಿಂತನಶೀಲ ಬರಹಗಾರರಾದ ಶ್ರೀ ಕೆ.ಪಿ. ಪೂರ್ಣಚಂದ್ರ ತೇಜಸ್ವಿಯವರ ನಿಧನದ ಬಗ್ಗೆ

ಅಧ್ಯಕ್ಷರು :– ಆಧುನಿಕ ಕನ್ನಡ ಸಾಹಿತ್ಯ ಕ್ಷೇತ್ರದ ಚಿಂತನಶೀಲ ಬರಹಗಾರರಾದ ಶ್ರೀ ಕೆ.ಪಿ. ಪೂರ್ಣಚಂದ್ರ ತೇಜಸ್ವಿಯವರು ನಿಧನ ಹೊಂದಿರುವುದನ್ನು ಈ ಸದನಕ್ಕೆ ಅತ್ಯಂತ ವಿಷಾದದಿಂದ ತಿಳಿಸಬಯಸುತ್ತೇನೆ.

ಶಿವಮೊಗ್ಗ ಜಿಲ್ಲೆಯ ತೀರ್ಥಹಳ್ಳಿ ತಾಲ್ಲೂಕಿನ ಕುಪ್ಪಳ್ಳಿಯಲ್ಲಿ ದಿನಾಂಕ 08–09–1938 ರಂದು ಜನಿಸಿದ್ದ ಶ್ರೀ ಪೂರ್ಣಚಂದ್ರ ತೇಜಸ್ವಿ ಅವರು ಆಧುನಿಕ ಕನ್ನಡ ಸಾಹಿತ್ಯ ಕ್ಷೇತ್ರದ ಶ್ರೇಷ್ಠ ಕವಿಗಳಾಗಿದ್ದರು. ರಾಷ್ಟ್ರಕವಿ ಕುವೆಂಪು ಅವರ ಮಗನಾಗಿದ್ದ ಶ್ರೀಯುತರು ಹಲವಾರು ಕೃತಿಗಳನ್ನು ರಚಿಸಿದ್ದಾರೆ. ಇವರ ಚಿದಂಬರ ರಹಸ್ಯ ಕಾದಂಬರಿಗೆ 1985 ರಲ್ಲಿ ರಾಜ್ಯ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಮತ್ತು 1987 ರಲ್ಲಿ ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಪಡೆದಿದ್ದಾರೆ. ಇವರ ಹಲವು ಕೃತಿಗಳು ಚಲನಚಿತ್ರವಾಗಿ ರಾಜ್ಯ ಹಾಗೂ ರಾಷ್ಟ್ರ ಪ್ರಶಸ್ತಿಗಳನ್ನು ಗಳಿಸಿವೆ. ವೈಚಾರಿಕಾ ದೃಷ್ಟಿ ಮತ್ತು ಅಭಿವ್ಯಕ್ತಿಯ ನೂತನ ಕಲೆಗಾರಿಕೆಯಿಂದಾಗಿ ತೇಜಸ್ವಿಯವರು ಕನ್ನಡ ಸಾರಸ್ವತ ಲೋಕದ ದಿಗ್ಗಜಗಳಲ್ಲಿ ಒಬ್ಬರಾಗಿದ್ದು, ಇವರ ನಿಧನದಿಂದಾಗಿ ಕನ್ನಡ ಸಾಹಿತ್ಯ ಕ್ಷೇತ್ರ ಬಡವಾಗಿದೆ.

ಶ್ರೀಯುತರು ಇಂದು ದಿನಾಂಕ 05–04–2007 ರಂದು ನಿಧನ ಹೊಂದಿರುತ್ತಾರೆ. ಮೃತರ ಗೌರವಾರ್ಥ ಮಾನ್ಯ ಸದಸ್ಯರುಗಳು ಎದ್ದು ನಿಂತು ಒಂದು ನಿಮಿಷ ಮೌನವನ್ನು ಆಚರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು :– ಈಗ ಸಭೆಯು ಮುಕ್ತಾಯವಾಗಿ ಮಂಗಳವಾರ ಬೆಳಿಗ್ಗೆ 11–00 ಗಂಟೆಗೆ ಸೇರುವುದು

(ಸದನವು ಸಂಜೆ 4 ಗಂಟೆ 15 ನಿಮಿಷಕ್ಕೆ ಮುಕ್ತಾಯಗೊಂಡು ಪುನಃ ದಿನಾಂಕ 10 ನೇ ಏಪ್ರಿಲ್ 2007 ರ ಮಂಗಳವಾರದಂದು ಬೆಳಿಗ್ಗೆ 11–00 ಗಂಟೆಗೆ ಸೇರಲು ನಿಶ್ಚಯಿಸಿತು)